## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 40 |
| 2. ಮಾನ್ಯ ಸದಸ್ಯರ ಹೆಸರು | : | ಶ್ರೀ ಅ.ದೇವೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| 3. ಉತ್ತರಿಸಬೇಕಾದ ದಿನಾಂಕ | : | 13.02.2024 |
| 4. ಉತ್ತರಿಸುವ ಸಚಿವರು | : | ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿನ ಅನೇಕ ಕಬ್ಬು ಬೆಳೆಗಾರರು ಬೆಳೆಯುವ ಕಬ್ಬಿನ ಬೆಳೆಗೆ ಸರ್ಕಾರ ಬೆಂಬಲ ಬೆಲೆ ನಿಗದಿಪಡಿಸಿದ್ದು ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆವತಿಯಿಂದ ನಿಗದಿಪಡಿಸಿದ ಬೆಂಬಲ ಬೆಲೆ ಪಾವತಿಸದೆ ನೂರಾರು ಕಬ್ಬು ಬೆಳೆಗಾರರು ಆರ್ಥಿಕವಾಗಿ ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೇಂದ್ರ ಸರ್ಕಾರದ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಮಂತ್ರಾಲಯದ ಅಧೀನದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಪತ್ರ ಸಂಖ್ಯೆ:3(1)/2022-SP-I, ದಿನಾಂಕ: 06.07.2023ರಲ್ಲಿ, 2023-24ನೇ ಸಾಲಿನ ಸಕ್ಕರೆ ಹಂಗಾಮಿಗೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (Fair and Remunerative Price) ನಿಗದಿಗೊಳಿಸಲಾಗಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ.<br>1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.315.00<br>2. ಶೇಕಡ 10.25ಕ್ಕೆ ಮೇಲ್ಪಟ್ಟ ಇಳುವರಿಗೆ ತದನಂತರದ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.3.07 ರಂತೆ ಹೆಚ್ಚುವರಿ ಬೆಲೆ.<br>3. ಶೇಕಡ 10.25ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕಿಂತ ಮೇಲ್ಪಟ್ಟ ಇಳುವರಿಯನ್ನು ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಿಸಿದಂತೆ ಶೇಕಡ 0.1 ರಷ್ಟು ಇಳುವರಿಗೆ ಕಡಿಮೆಗೆ ಪ್ರತಿ ಕ್ವಿಂಟಾಲ್‌ಗೆ ರೂ.3.07ರಷ್ಟು ಪ್ರಮಾಣದಲ್ಲಿ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು.<br>4. ಶೇಕಡ 9.5 ರಷ್ಟು ಅಥವಾ 9.50 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆ.ಟನ್‌ಗೆ ರೂ.291.975 ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸುವುದು.<br><br>2022-23ನೇ ಸಾಲಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳು ಪಡೆದ ಸಕ್ಕರೆ ಇಳುವರಿಯನ್ನು ಆಧರಿಸಿ, ಮೇಲ್ಕಂಡ ಮಾರ್ಗಸೂಚಿಗಳನ್ವಯ ರಾಜ್ಯದ ಸಕ್ಕರೆ ಕಾರ್ಖಾನೆಗಳು 2023-24ನೇ ಹಂಗಾಮಿನಲ್ಲಿ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ನಿಗದಿಪಡಿಸಿ, ದಿನಾಂಕ:07.11.2023ರಂದು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಆದೇಶವನ್ನು ಹೊರಡಿಸಲಾಗಿದೆ. ಸದರಿ ಆದೇಶದಲ್ಲಿ ನಿಗದಿಪಡಿಸಿರುವಂತೆ ಸಂಬಂಧಿಸಿದ ರಾಜ್ಯದ ಸಕ್ಕರೆ ಕಾರ್ಖಾನೆಗಳು ಪ್ರತಿ ಮೆ.ಟನ್ ಒಂದಕ್ಕೆ ಕನಿಷ್ಠ ರೂ.2920/- ಮತ್ತು ಗರಿಷ್ಠ ರೂ.3773/-ಗಳ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಪಾವತಿ ಮಾಡುತ್ತಿವೆ. |
| (ಆ) | ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆವತಿಯಿಂದ ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆಯ ಮೊತ್ತವನ್ನು ಪಾವತಿಸದೇ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಕ್ಕರೆ ಕಾರ್ಖಾನೆ ಮಾಲೀಕರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು; | ದಿನಾಂಕ:15.01.2024ರ ಅಂತ್ಯಕ್ಕೆ, 2023-24ನೇ ಸಾಲಿನಲ್ಲಿ 76 ಸಕ್ಕರೆ ಕಾರ್ಖಾನೆಗಳು ಒಟ್ಟು 399.26 ಲಕ್ಷ ಮೆ.ಟನ್ ಕಬ್ಬನ್ನು ನುರಿಸಿ 35.93 ಲಕ್ಷ ಮೆ.ಟನ್ ಸಕ್ಕರೆಯನ್ನು ಉತ್ಪಾದಿಸಿದ್ದು, ಶೇಕಡವಾರು ಇಳುವರಿ 9% ಇರುತ್ತದೆ. ಅದರಂತೆ, ದಿನಾಂಕ:15.01.2024ರ ಅಂತ್ಯಕ್ಕೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ರೂ.13623.76 ಕೋಟಿಗಳ ಕಬ್ಬು ಬಿಲ್ಲನ್ನು ಪಾವತಿಸಬೇಕಾಗಿದ್ದು, ಇದರಲ್ಲಿ ರೂ.10148.19 ಕೋಟಿಗಳನ್ನು ಪಾವತಿಸಲಾಗಿರುತ್ತದೆ ಹಾಗೂ ರೂ.3475.57 ಕೋಟಿಗಳನ್ನು ಪಾವತಿಸುವುದು ಬಾಕಿ ಇರುತ್ತದೆ. ಪ್ರಸ್ತುತ, 2023-24ನೇ ಕಬ್ಬು ನುರಿಸುವ ಹಂಗಾಮು ಚಾಲ್ತಿಯಲ್ಲಿರುವುದರಿಂದ ಕಬ್ಬು ಬಿಲ್ಲನ್ನು ಪಾವತಿಸಲು 14 ದಿನಗಳವರೆಗೆ ಕಾಲಾವಕಾಶವಿರುತ್ತದೆ. 14 ದಿನಗಳ ಮೇಲ್ಪಟ್ಟು ಕಬ್ಬು ಬಿಲ್ಲನ್ನು ಬಾಕಿ ಉಳಿಸಿಕೊಂಡಿರುವ ಸಂಬಂಧಿಸಿದ ಕಾರ್ಖಾನೆಗಳಿಗೆ ಕಬ್ಬು |

| | | |
|---|---|---|
| | | ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ದಿನಾಂಕ: 17.01.2024ರಂದು ಶಾಸನಬದ್ಧ ನೋಟಿಸನ್ನು ಜಾರಿಗೊಳಿಸಲಾಗಿದ್ದು, ರೈತರ ಕಬ್ಬು ಬಿಲ್ಲು ಬಾಕಿಯನ್ನು ಪಾವತಿಸುವಂತೆ ಸೂಚಿಸಲಾಗಿದೆ.<br><br>2022-23ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಕಬ್ಬು ಬಿಲ್ಲು ಬಾಕಿ ಇರುವುದಿಲ್ಲ.<br><br>2018-19ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಈ ಕೆಳಕಂಡ ಮೂರು ಸಕ್ಕರೆ ಕಾರ್ಖಾನೆಗಳು ಕಬ್ಬು ಬಿಲ್ಲು ಬಾಕಿಯನ್ನು ಉಳಿಸಿಕೊಂಡಿದ್ದು ವಿವರ ಈ ಕೆಳಗಿನಂತೆ ಇರುತ್ತವೆ.<br>(ರೂ.ಕೋಟಿಗಳಲ್ಲಿ) |

| ವರ್ಷ | ಕಾರ್ಖಾನೆಯಹೆಸರು | ಬಾಕಿಯಿರುವ ಮೊತ್ತ |
|---|---|---|
| 2018-19 | 1. ಬೀದರ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್, ಹುಮನಾಬಾದ ತಾಲ್ಲೂಕು, ಬೀದರ್ ಜಿಲ್ಲೆ | 0.89 |
| | 2. ಭವಾನಿ ಶುಗರ್ಸ್ ಲಿ., ಬರೂರ, ಬೀದರ್ ಜಿಲ್ಲೆ | 1.80 |
| | 3. ಧ್ಯಾನಯೋಗಿ ಶ್ರೀ ಶಿವಕುಮಾರ ಸ್ವಾಮೀಜಿ ಶುಗರ್ಸ್ ಲಿ., ಇಂಡಿ, ವಿಜಯಪುರ ಜಿಲ್ಲೆ | 1.25 |
| | ಒಟ್ಟು | 3.94 |

| | | |
|---|---|---|
| | | 2018-19ನೇ ಸಾಲಿನಲ್ಲಿ ಬಾಕಿ ಉಳಿಸಿಕೊಂಡಿರುವ ಮೂರು ಕಾರ್ಖಾನೆಗಳ ವಿರುದ್ಧ ವಸೂಲಾತಿ ಪ್ರಮಾಣ ಪತ್ರವನ್ನು ಹೊರಡಿಸಿ ಕ್ರಮಕೈಗೊಳ್ಳಲು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿರುತ್ತದೆ. ಆದಾಗ್ಯೂ, ಈ ಸಕ್ಕರೆ ಕಾರ್ಖಾನೆಗಳು ಕಬ್ಬು ಬಿಲ್ಲು ಪಾವತಿಸಿರುವುದಿಲ್ಲ. ಈ ಮೂರು ಸಕ್ಕರೆ ಕಾರ್ಖಾನೆಗಳು ಕಳೆದ ನಾಲ್ಕು ಹಂಗಾಮುಗಳಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ಕಾರ್ಖಾನೆಗಳಿಗೆ ಯಾವುದೇ ಆದಾಯದ ಮೂಲಗಳು ಇರುವುದಿಲ್ಲ. ಆದ್ದರಿಂದ ಕಬ್ಬು ಬಿಲ್ಲು ವಸೂಲು ಮಾಡುವಲ್ಲಿ ವಿಳಂಬವಾಗಿರುತ್ತದೆ.<br><br>ಆದ್ದರಿಂದ, ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು, ಈ ಮೂರು ಸಕ್ಕರೆ ಕಾರ್ಖಾನೆಗಳ ಚರ ಮತ್ತು ಸ್ಥಿರಾಸ್ತಿಗಳನ್ನು ಹರಾಜು ಪ್ರಕ್ರಿಯೆಗೆ ಒಳಪಡಿಸಿ ಕಬ್ಬು ಬಿಲ್ಲು ವಸೂಲಾತಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದ್ದು, ವಸೂಲಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| (ಇ) | ಕಬ್ಬು ಬೆಳೆಗಾರರಿಗೆ ರಾಜ್ಯದ ಸಕ್ಕರೆ ಕಾರ್ಖಾನೆ ಮಾಲೀಕರಿಂದ ಪಾವತಿಸಬೇಕಾದ ಒಟ್ಟು ಮೊತ್ತವೆಷ್ಟು?<br>(ಕಾರ್ಖಾನೆವಾರು ಮಾಹಿತಿ ಒದಗಿಸುವುದು) | 2023-24ನೇ ಸಾಲಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಲ್ಲಿ ನುರಿಸಿರುವ ಕಬ್ಬಿನ ಪ್ರಮಾಣ ಹಾಗೂ ಪಾವತಿಸಬೇಕಾದ ಕಬ್ಬು ಬಿಲ್ಲಿನ ಜಿಲ್ಲಾವಾರು ಮತ್ತು ಕಾರ್ಖಾನೆವಾರು ಪಾವತಿ ವಿವರಗಳನ್ನು **ಅನುಬಂಧ** ದಲ್ಲಿ ಒದಗಿಸಿದೆ. |

ಸಂಖ್ಯೆ: ಸಿಐ 40 ಎಸ್‌ಜಿಎಫ್ 2024

(ಶಿವಾನಂದ ಎಸ್ ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು